ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಕಾರ್ಮಿಕ ಇಲಾಖೆಯಿಂದ ಪರವಾನಗಿ ಪಡೆಯುವ ಬಗ್ಗೆ

ಶ್ರೀ ಸಿ. ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳA ಕ್ಷೇತ್ರ) :-

277 (355) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ಒಳಪಡುವ ಕಾರ್ಖಾನೆ ಸಂಸ್ಥೆಗಳು ಯಾವುವು; ಇಲಾಖೆಯಿಂದ ಪರವಾನಗಿಯನ್ನು ಪಡೆಯಲು ಅನುಸರಿಸಲಾಗುವ ಮಾನದಂಡಗಳೇನು ; ಮತ್ತು ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಆ) ಪರವಾನಗಿಯನ್ನು ಪಡೆದ ಸಂಸ್ಥೆಗಳಲ್ಲಿ ಕಾರ್ಮಿಕ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳನ್ನು ರೂಪಿಸಬೇಕಾಗಿದೆ ;

(ಇ) ಕಳೆದ 3 ವರ್ಷಗಳಲ್ಲಿ ಇಲಾಖೆಯಿಂದ ಪರವಾನಗಿ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆ/ಸಂಸ್ಥೆಗಳು ಯಾವುವು; (ವರ್ಷವಾರು, ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಇಂತಹ ಕಾರ್ಖಾನೆ/ಸಂಸ್ಥೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ ; ಹಾಗಿದ್ದಲಿ,್ಲ ಸಂಪೂರ್ಣ ವಿವರ ನೀಡುವುದು;

(ಉ) ಕಟ್ಟಡ ನಿರ್ಮಾಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರು ನಿರ್ಮಾಣ ಸ್ಥಳದಲ್ಲಿ ಅಕಾಲಿಕ ಸಾವಿಗೆ ತುತ್ತಾದಲ್ಲಿ ಮೃತರ ಕುಟುಂಬಕ್ಕೆ ಪರಿಹಾರವನ್ನು ಭರಿಸುವವರು ಯಾರು; (ಘಟನೆಯಾದಾರಿತ ವಿವರಗಳನ್ನು ನೀಡುವುದು)

(ಊ) ಕಳೆದ 3 ವರ್ಷಗಳಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ; ಇವುಗಳಲ್ಲಿ ಎಷ್ಟು ಮೃತರ ಕುಟುಂಬಕ್ಕೆ ಪರಿಹಾರವನ್ನು ಒದಗಿಸಲಾಗಿದೆ; (ಜಿಲ್ಲಾವಾರು ಮತ್ತು ವರ್ಷವಾರು ವಿವರಗಳನ್ನು ನೀಡುವುದು) ಹಾಗೂ ಪರಿಹಾರ ಒದಗಿಸದಿರುವ ಪ್ರಕರಣಗಳೆಷ್ಟು ?